# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1122 (1211)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಬಿ.ಪಿ.ಎಲ್. ಪಡಿತರ ಚೀಟಿ ಪಡೆಯಲು ಸರ್ಕಾರದ ಮಾನದಂಡಗಳೇನು

(ಅ) ಬಿ.ಪಿ.ಎಲ್. ಪಡಿತರ ಚೀಟಿ ಪಡೆಯಲು ಇರುವ ಸರ್ಕಾರದ ಮಾನದಂಡವೇನು;
(ಆ) ರಾಜ್ಯದಲ್ಲಿ ಬಿ.ಪಿ.ಎಲ್. ಕಾರ್ಡ್‌ಗಳನ್ನು ಪಡೆದಿರುವವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಸರ್ಕಾರ ಪಡಿತರಿಗೆ ಜೋಳ, ರಾಗಿ, ತೊಗರಿ ನೀಡಲು ಬಯಸಿದೆಯೇ; ಇವುಗಳನ್ನು ನೀಡುವುದರಿಂದ ಅಕ್ಕಿ ಪ್ರಮಾಣ ಕಡಿಮೆ ಮಾಡುವ ಆಲೋಚನೆ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಯಾವ ರೀತಿ ನೀಡಲಾಗುವುದು;

(ಈ) ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಆಲೋಚನೆ ಸರ್ಕಾರದ ಮುಂದಿದೆಯೇ;

(ಉ) ನ್ಯಾಯಬೆಲೆ ಅಂಗಡಿಗಳಲ್ಲಿ ಬಯೋಮೆಟ್ರಿಕ್ ಪಡೆಯಲು ಕಾರ್ಡ್‌ದಾರರಿಂದ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಜಿಲ್ಲಾವಾರು ವಿವರ ನೀಡುವುದು)